# ಸಭೆಯ ನಡಾವಳಿಗಳು

ದಿನಾಂಕ: 08-03-2021 ರ ಸಮಯ 11-00 ಗಂಟೆ ಪೂರ್ವಾಹ್ನದಂದು ವಾರ್ಡ್ ಸಂಖ್ಯೆ 195 ರ ವಾರ್ಡ್ ಸಮಿತಿಯ ಸಭೆಯನ್ನು ನೋಡೆಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಗಿರುವ ಸಭೆಯ ನಡಾವಳಿಗಳು

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ ಕೆ.ವಿ.ಶಶಿಕುಮಾರ್ | ನೋಡಲ್ ಅಧಿಕಾರಿ/ಕಾರ್ಯಪಾಲಕ ಅಭಿಯಂತರರು |
| 2 | ಶ್ರೀ ರಂಗಸ್ವಾಮಿ ಸ.ಕಂ.ಅ | ಸದಸ್ಯ ಕಾರ್ಯದರ್ಶಿ/ಸಹಾಯಕ ಕಂದಾಯ ಅಧಿಕಾರಿ |
| 3 | ಶ್ರೀ ಮಹೇಶ್.ಜೆ.ಆರ್. | ಅರಣ್ಯ ವೀಕ್ಷಕರು |
| | ಶ್ರೀಮತಿ ಶೋಭಾ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ.ಮೋಹನ್.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ಮಾರುತಿ ಕೆ.ಎನ್ | ಸಹಾಯಕ ಇಂಜಿನಿಯರ್, ವಾರ್ಡ್ ನಂ.195 |
| 6 | ಶ್ರೀ ಎಸ್ ಆರ್ ನಾಗರಾಜ್ | ಸಹಾಯಕ ಅಭಿಯಂತರರು BWSSB (ಎಸ್-2) |
| 7 | ಶ್ರೀ ಕಿರಣ್ | ಕಿರಿಯ ಅಭಿಯಂತರರು BESCOM (ಎಸ್-6) |
| 8 | ಶ್ರೀ.ಜಿ.ವಿ.ಹೆಬ್ಬಾರ್ | ಸದಸ್ಯರು |
| 9 | ಶ್ರೀ.ಅನಂತ ಪದ್ಮನಾಬ | ಸದಸ್ಯರು |
| 10 | ಶ್ರೀ.ಸದಾಶಿವ | ಸದಸ್ಯರು |
| 11 | ಶ್ರೀ.ನೀರಜ್ ಕುಮಾರ್ | ಸದಸ್ಯರು |
| 12 | ಶ್ರೀ.ಕೆಂಪರಾಜು | ಸದಸ್ಯರು |
| 13 | ಶ್ರೀ.ಪ್ರಕಾಶ್ | ಸದಸ್ಯರು |

**ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.**

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಸಭೆಯಲ್ಲಿ ಓದಲಾಯಿತು.
2. ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು

| ಕ್ರಮ ಸಂಖ್ಯೆ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಎಲಿಟಾ ಅಪಾರ್ಟ್‌ಮೆಂಟ್ ರಸ್ತೆಯ ಎರಡು ಬದಿ ವಾಹನಗಳನ್ನು ನಿಲ್ಲಿಸುತ್ತಿರುವ ಬಗ್ಗೆ. | ವಾರ್ಡ್‌ನ ವ್ಯಾಪ್ತಿಯ ಎಲಿಟಾ ಅಪಾರ್ಟ್‌ಮೆಂಟ್ ರಸ್ತೆಯ ಎರಡು ಬದಿ ವಾಹನಗಳನ್ನು ನಿಲ್ಲಿಸುತ್ತಿದ್ದು ಸಾರ್ವಜನಿಕರ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು ಸಂಬಂಧಪಟ್ಟ ಸಂಚಾರಿ ಪೋಲೀಸ್ ಠಾಣೆಯ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿ ಪತ್ರ ಬರೆಯಲು ಸೂಚಿಸಲಾಯಿತು. | ಆರಕ್ಷಕ ನಿರೀಕ್ಷಕರು, ಸಂಚಾರಿ ಪೋಲಿಸ್ ಠಾಣೆ |
| 2 | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಕಾರ್ಯವನ್ನು ಹೊಸ ಗುತ್ತಿಗೆದಾರರಿಗೆ ನೇಮಿಸಿರುವ ಬಗ್ಗೆ. | ವಾರ್ಡ್ ವ್ಯಾಪ್ತಿಯಲ್ಲಿ ದಿನಾಂಕ 01-02-2021 ರಿಂದ ಘನತ್ಯಾಜ್ಯ ನಿರ್ವಹಣೆಯನ್ನು ಶ್ರೀ ಸತೀಶ್.ಎಸ್ ಗುತ್ತಿಗದಾರರಿಗೆ ವಹಿಸಲಾಗಿರುತ್ತದೆ ಎಂಬುದಾಗಿ ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ. | ಸಹಾಯಕ ಕಾರ್ಯಪಾಲಕ ಅಭಿಯಂತರರು, (ಘನತ್ಯಾಜ್ಯ) |

Scanned with CamScanner

| ಕ್ರಮ ಸಂಖ್ಯೆ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 3 | ವಾರ್ಡ್ ವ್ಯಾಪ್ತಿಯ ಸ್ಟ್ರೀಟ್ ಲೈಟ್‌ಗಳ ಬಗ್ಗೆ ಚರ್ಚಿಸಲಾಯಿತು | ವಾರ್ಡ್ ವ್ಯಾಪ್ತಿಯಲ್ಲಿ ಬರುವ ಸ್ಟ್ರೀಟ್ ಲೈಟ್‌ಗಳ ಆಟೋಮೆಟಿಕ್ ನಿಯಂತ್ರಣಕ್ಕೆ ಕ್ರಮವಹಿಸಲು ಹೊಸದಾಗಿ ಗುತ್ತಿಗೆದಾರರಾದ ಜಿ.ಎಸ್.ಎಲೆಕ್ಟ್ರಿಕಲ್ಸ್ ಮಂಜುನಾಥ (9448886499) ಎಲೆಕ್ಟ್ರಿಕಲ್ ಇಂಜನಿಯರ್ ರವರಿಗೆ ಸೂಚಿಸಲಾಯಿತು | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ-ಎಸ್12) |
| 4 | ವಾರ್ಡ್ ವ್ಯಾಪ್ತಿಯಲ್ಲಿ ಬರುವ ಆರ್.ಬಿ.ಐ ಬಡಾವಣೆಯ ವಾಟರ್ ಟ್ಯಾಂಕ್ ಹತ್ತಿರ, ಚರಂಡಿಗಳ ಕವರಿಂಗ್ ಸ್ಲ್ಯಾಬ್ ಹಾಕಿಕೊಡುವ ಬಗ್ಗೆ ಚರ್ಚಿಸಲಾಯಿತು | ವಾರ್ಡ್ ವ್ಯಾಪ್ತಿಯಲ್ಲಿ ಆರ್.ಬಿ.ಐ ಬಡಾವಣೆಯ ವಾಟರ್ ಟ್ಯಾಂಕ್ ಹತ್ತಿರ, ಚರಂಡಿಗಳ ಕವರಿಂಗ್ ಸ್ಲ್ಯಾಬ್ ಅಳವಡಿಸಲು 15 ದಿನಗಳ ಕಾಲವಕಾಶವನ್ನು ಕೋರಿರುತ್ತಾರೆ. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಅಂಜನಾಪುರ ಉಪ ವಿಭಾಗ) |
| 5 | ವಾರ್ಡ್‌ನ ವ್ಯಾಪ್ತಿಯಲ್ಲಿ ಪ್ಲ್ಯಾಸ್ಟಿಕ್ ಸಂಗ್ರಹಣೆ ಬಗ್ಗೆ | ವಾರ್ಡ್‌ನ ವ್ಯಾಪ್ತಿಯಲ್ಲಿ ಪ್ಲ್ಯಾಸ್ಟಿಕ್ ಸಂಗ್ರಹಣೆ ಜಾಗೃತಿ ಮೂಡಿಸಲು ಸಭೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಯಿತು | ಸಹಾಯಕ ಕಾರ್ಯಪಾಲಕ ಅಭಿಯಂತರರು, (ಘನತ್ಯಾಜ್ಯ) |
| 6 | ವಾರ್ಡ್ ವ್ಯಾಪ್ತಿಯ ಆರ್.ಬಿ.ಐ ಲೇಔಟ್‌ನ ಮುಖ್ಯ ರಸ್ತೆ ಮತ್ತು ಅಡ್ಡ ರಸ್ತೆಗಳಲ್ಲಿ ಬೆಸ್ಕಾಂ ವತಿಯಿಂದ ಯು.ಜಿ ಕೇಬಲ್ ಅಳವಡಿಸುತ್ತಿರುವ ಬಗ್ಗೆ. | ವಾರ್ಡ್ ವ್ಯಾಪ್ತಿಯ ಆರ್.ಬಿ.ಐ ಲೇಔಟ್‌ನ ಮುಖ್ಯ ರಸ್ತೆ ಮತ್ತು ಅಡ್ಡ ರಸ್ತೆಗಳಲ್ಲಿ ಬೆಸ್ಕಾಂ ವತಿಯಿಂದ ಯು.ಜಿ ಕೇಬಲ್ ಅಳವಡಿಸಿ ರಸ್ತೆಯ ಯಥಾಸ್ಥಿತಿಯನ್ನು ಕಾಪಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿ ಮುಂದಿನ ಸಭೆಯಲ್ಲಿ ಪಾಲನಾ ವರದಿಯನ್ನು ಸಲ್ಲಿಸಲು ತಿಳಿಸಲಾಯಿತು | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) |
| 7 | ಇತರೆ ಇಲಾಖೆಯಿಂದ ಅಧಿಕಾರಿ/ಸಿಬ್ಬಂದಿಗಳು ಗೈರುಹಾಜರಾಗಿರುವ ಬಗ್ಗೆ ಚರ್ಚಿಸಲಾಯಿತು. | ಪೋಲಿಸ್ ಇಲಾಖೆ, ಅರಣ್ಯ ಇಲಾಖೆ ಮತ್ತು ಇತರೆ ಇಲಾಖೆಯಿಂದ ಅಧಿಕಾರಿ/ಸಿಬ್ಬಂದಿಗಳು ಮುಂದಿನ ಸಭೆಯಲ್ಲಿ ಕಡ್ಡಾಯವಾಗಿ ಹಾಜರಾಗಬೇಕೆಂದು ತಿಳಿಸಲಾಯಿತು | ಸಹಾಯಕ ಕಂದಾಯ ಅಧಿಕಾರಿ (ಯಲಚೇನಹಳ್ಳಿ) |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್-195 ಬೃ.ಬೆಂ.ಮ.ಪಾಲಿಕೆ

Scanned with CamScanner